<u>ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>

<u>ಮುಂದುವರೆದ ಮುಖ್ಯ ವಿಚಾರಣೆ ಅರ್ಜಿದಾರರ ಪರವಾಗಿಃ ಶ್ರೀ ವೈ.ಎಂ.ಕೆ., ವಕೀಲರಿಂದಃ</u>

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸುತ್ತಿದ್ದು ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು ನಾನೇ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ದಾವಾ ಆಸ್ತಿಗಳಿಗೆ ಸಂಬಂಧಪಟ್ಟ 10 ಆರ್.ಟಿ.ಸಿ. ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿಃ 1 ರಿಂದ 10 ಅಂತ ಗುರುತಿಸಲಾಯಿತು. ಮ್ಯುಟೇಶನ್ ರಿಜಿಸ್ಟರ್ ಎಕ್ಸ್ ಟ್ರ್ಯಾಕ್ಟ್ ನ್ನು ಹಾಜರುಪಡಿಸಿದ್ದು ಅದನ್ನು ನಿಪಿಃ 11 ಅಂತ, ದಾವಾ ಆಸ್ತಿಗೆ ಸಂಬಂಧಪಟ್ಟ ಸರ್ವೆ ನಂ. 9 ಹಾಗೂ ಸರ್ವೆ ನಂ. 9/1 ಪಿ5 ಒಟ್ಟು 7 ಅರ್.ಟಿ.ಸಿ. ಎಕ್ಸ್ ಟ್ರ್ಯಾಕ್ಟ್ ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿಃ 12 ರಿಂದ 18 ಅಂತ, ವಿಶೇಷ ಭೂ ಸ್ವಾಧೀನ ಅಧಿಕಾರಿಗಳು, ಹುಲ್ಲೂರು ಇವರಿಗೆ ನಾನು ಸಲ್ಲಿಸಿದ ಅರ್ಜಿಯ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿಃ 19 ಅಂತ, ಅವಾರ್ಡ್ ನೋಟೀಸ್‌ನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿಃ 20 ಅಂತ, ದಾವಾ ಆಸ್ತಿಗೆ ಸಂಬಂಧಪಟ್ಟ 4 ಡಿಜಿಟಲ್ ಭಾವಚಿತ್ರಗಳನ್ನು ಹಾಜರುಪಡಿಸಿದ್ದು ಸದರಿ ಭಾವಚಿತ್ರಗಳನ್ನು ಗುರುತಿಸಲು ಪ್ರತಿವಾದಿ ಪರ ವಕೀಲರು ತಕರಾರು ಮಾಡಿದ್ದರಿಂದ ತಕರಾರಿಗೆ ಒಳಪಟ್ಟು ಅವುಗಳನ್ನು ನಿಪಿಃ 21 ರಿಂದ 24 ಅಂತ, ಫೋಟೋ ಸ್ಟುಡಿಯೋದವರು ನೀಡಿರುವ ರಸೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿಃ 25 ಅಂತ, 7 ಅಂಚೆ ಸ್ವೀಕೃತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿಃ 26 ರಿಂದ 32 ಅಂತ ಗುರುತಿಸಲಾಯಿತು.

**(ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದರಿಂದ, ಸಮಯ ನೀಡಿ ಮುಂದೂಡಲಾಯಿತು)**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.

ಓ.ಹೇ.ಕೇ.ಸ. ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ, ಚಳ್ಳಕೆರೆ.